**Bangalore**
**Regional News**
**15.12.2025 / 14.30 hrs**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಹಿರಿಯ ಶಾಸಕ ಶಾಮನೂರು ಶಿವಶಂಕರಪ್ಪ ನಿಧನ ಹಿನ್ನೆಲೆ; ಉಭಯ ಸದನಗಳ ಕಲಾಪ ನಾಳೆಗೆ ಮುಂದೂಡಿಕೆ

೨. ಇಂದು ಸಂಜೆ ದಾಣಗೆರೆಯಲ್ಲಿ ಶಾಮನೂರು ಅಂತ್ಯಕ್ರಿಯೆ; ಮುಖ್ಯಮಂತ್ರಿ ಸಿದ್ದರಾಮಯ್ಯ, ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ಹಲವು ಗಣ್ಯರು ಭಾಗಿ

೩. ಬೆಳಗಾವಿ ಅಧಿವೇಶನ ಒಂದು ವಾರಗಳ ಕಾಲ ವಿಸ್ತರಿಸುವಂತೆ ಸಭಾಧ್ಯಕ್ಷರಿಗೆ ಪ್ರತಿಪಕ್ಷ ನಾಯಕ ಆರ್.ಅಶೋಕ ಪತ್ರ

೪. ನ್ಯಾಷನಲ್ ಹೆರಾಲ್ಡ್ ಪ್ರಕರಣ; ನೊಟೀಸ್‌ಗೆ ಉತ್ತರಿಸಲು ಕಾಲಾವಕಾಶ ಕೋರಲು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಿರ್ಧಾರ

೫. ಶುದ್ಧ ಗಾಳಿ ಪರಿಸರ ಹೊಂದಿದ ರಾಜ್ಯದ ನಗರಗಳಲ್ಲಿ ಕೊಪ್ಪಳಕ್ಕೆ ಪ್ರಥಮ ಸ್ಥಾನ

<><*<><>*><>

ವಿಧಾನಸಭೆಯ ಕಲಾಪ ಆರಂಭವಾಗುತ್ತಿದ್ದಂತೆ ಸಭಾಧ್ಯಕ್ಷ ಯು.ಟಿ.ಖಾದರ್, ಹಾಲಿ ಶಾಸಕರು, ಮಾಜಿ ಸಚಿವರು, ಮಾಜಿ ಸಂಸದರೂ ಆಗಿದ್ದ ಅಖಿಲ ಭಾರತ ವೀರಶೈವ ಮಹಾಸಭಾದ ಅಧ್ಯಕ್ಷ ಶಾಮನೂರು ಶಿವಶಂಕರಪ್ಪ ನಿನ್ನೆ ನಿಧನರಾಗಿರುವುದನ್ನು ವಿಧಾನಸಭೆಗೆ ವಿಷಾದದಿಂದ ತಿಳಿಸಿ, ಸಂತಾಪ ಸೂಚನಾ ನಿರ್ಣಯವನ್ನು ಮಂಡಿಸಿದರು. ಎಂಜಿನಿಯರಿಂಗ್, ವೈದ್ಯಕೀಯ ಸೇರಿದಂತೆ ಹಲವಾರು ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸಿ, ಶಿಕ್ಷಣಕ್ಕೆ ಅಪಾರ ಕೊಡುಗೆ ನೀಡಿದ್ದಾರೆ ಎಂದು ಸ್ಮರಿಸಿದರು. ಸಂತಾಪ ಸೂಚನಾ ನಿರ್ಣಯವನ್ನು ಬೆಂಬಲಿಸಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ದಾವಣಗೆರೆ ಜಿಲ್ಲೆ ಸಾಮಾಜಿಕವಾಗಿ, ಆರ್ಥಿಕವಾಗಿ ಹಾಗೂ ಶೈಕ್ಷಣಿಕವಾಗಿ ಅಭಿವೃದ್ಧಿಯಾಗಲು ಶಾಮನೂರು ಶಿವಶಂಕರಪ್ಪ ಕಾರಣ ಎಂದು ಅಭಿಪ್ರಾಯಪಟ್ಟರು. ಇವರ ನಿಧನದಿಂದ ಜನಪರ ನಾಯಕನನ್ನು ರಾಜ್ಯ ಕಳೆದುಕೊಂಡಿದೆ ಎಂದು ತಮ್ಮ ಸಂತಾಪದಲ್ಲಿ ತಿಳಿಸಿದರು. ಬಳಿಕ ಸಚಿವರಾದ ಜಮೀರ್ ಅಹ್ಮದ್‌ಖಾನ್, ಶಾಸಕರಾದ ಎನ್.ಟಿ.ಶ್ರೀನಿವಾಸ, ಸಿಮೆಂಟ್ ಮಂಜು, ಎಚ್.ಡಿ.ರಂಗನಾಥ್ ಸೇರಿದಂತೆ ಹಲವರು ಸಂತಾಪ ವ್ಯಕ್ತಪಡಿಸಿದರು.

ಮೃತರ ಗೌರವಾರ್ಥ ಮೌನಾಚರಣೆಯ ಮೂಲಕ ಭಾವಪೂರ್ಣ ಶ್ರದ್ಧಾಂಜಲಿ

ಸಲ್ಲಿಸಲಾಯಿತು. ಬಳಿಕ ವಿಧಾನಸಭೆ ಕಲಾಪವನ್ನು ಸಭಾಧ್ಯಕ್ಷರು ನಾಳೆ ಬೆಳಗ್ಗೆ ೯.೩೦ ಕ್ಕೆ ಮುಂದೂಡಿದರು.

<><*<><>*><>

ನಿನ್ನೆ ನಿಧನರಾದ ಹಿರಿಯ ಶಾಸಕ ಶಾಮನೂರು ಶಿವಶಂಕರಪ್ಪ ಅವರಿಗೆ ವಿಧಾನಪರಿಷತ್‌ನಲ್ಲಿ ಇಂದು ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಬೆಳಿಗ್ಗೆ ಸದನ ಆರಂಭವಾಗುತ್ತಿದ್ದಂತೆ ಸಭಾಪತಿ ಬಸವರಾಜ ಹೊರಟ್ಟಿ ಅವರು, ಶಾಮನೂರು ಶಿವಶಂಕರಪ್ಪ ಅವರು ನಿಧನರಾಗಿರುವ ವಿಷಯವನ್ನು ಸದನಕ್ಕೆ ವಿಷಾದದಿಂದ ತಿಳಿಸಿ, ಸಂತಾಪ ನಿರ್ಣಯ ಮಂಡಿಸಿದರು. ಶಾಮನೂರು ಶಿವಶಂಕರಪ್ಪ ಅವರ ನಿಧನದಿಂದಾಗಿ ರಾಜ್ಯವು ಹಿರಿಯ ಶ್ರೇಷ್ಠ ಮುತ್ಸದ್ದಿ ಹಾಗೂ ಸರಳ ಸಜ್ಜನ ನಾಯಕರೊಬ್ಬರನ್ನು ಕಳೆದುಕೊಂಡಂತಾಗಿದೆ ಎಂದು ಸ್ಮರಿಸಿದರು. ಸಭಾನಾಯಕ ಎನ್.ಎಸ್. ಬೋಸರಾಜು ಮಾತನಾಡಿ, ದಾವಣಗೆರೆಯಲ್ಲಿ ಶಿಕ್ಷಣ ಸಂಸ್ಥೆಗಳನ್ನು ಕಟ್ಟಿ ಲಕ್ಷಾಂತರ ವಿದ್ಯಾರ್ಥಿಗಳಿಗೆ ಇಂಜಿನಿಯರಿಂಗ್, ವೈದ್ಯಕೀಯ ಸೇರಿದಂತೆ ಉನ್ನತ ಶಿಕ್ಷಣಕ್ಕೆ ನೆರವಾಗುವ ಮೂಲ ಶಿಕ್ಷಣ ಕ್ಷೇತ್ರಕ್ಕೆ ಅಪಾರ ಕೊಡುಗೆ ನೀಡಿದ್ದರು ಎಂದು ಸ್ಮರಿಸಿದರು. ವಿರೋಧ ಪಕ್ಷದ ನಾಯಕ ಚಲವಾದಿ ನಾರಾಯಣಸ್ವಾಮಿ ಮಾತನಾಡಿ, ಶಾಮನೂರು ಶಿವಶಂಕರಪ್ಪ ಅವರು ದಾವಣಗೆರೆಯ ಸರ್ವತೋಮುಖ ಅಭಿವೃದ್ಧಿಗೆ ಅಪಾರವಾಗಿ ಶ್ರಮಿಸಿದ್ದರು ಎಂದು ಗುಣಗಾನ ಮಾಡಿದರು. ಸಚಿವರಾದ ಕೆ.ಜೆ.ಜಾರ್ಜ್, ಕೆ.ಎಚ್.ಮುನಿಯಪ್ಪ, ಎಂ.ಸಿ.ಸುಧಾಕರ್, ಸದಸ್ಯರಾದ ಜೆಡಿಎಸ್ ನ ಬೋಜೇಗೌಡ, ಬಿಜೆಪಿಯ ಸಿ.ಟಿ.ರವಿ ಸೇರಿದಂತೆ ಮತ್ತಿತರರು ಶಾಮನೂರು ಶಿವಶಂಕರಪ್ಪ ಅವರ ಸೇವೆಯನ್ನು ಸ್ಮರಿಸಿದರು. ಸದಸ್ಯರು ಮೃತರ ಗೌರವಾರ್ಥ ಎದ್ದು ನಿಂತು ಒಂದು ನಿಮಿಷ ಮೌನ ಆಚರಿಸಿದರು. ಬಳಿಕ ಸಭಾಪತಿ ಬಸವರಾಜ ಹೊರಟ್ಟಿ ಅವರು ಕಲಾಪವನ್ನು ನಾಳೆಗೆ ಮುಂದೂಡಿದರು.

<><*<><>*><>

ಪಕ್ಷದ ಹಿರಿಯ ನಾಯಕ, ಅಖಿಲ ಭಾರತ ವೀರಶೈವ ಮಹಾಸಭಾ ಅಧ್ಯಕ್ಷ ಶಾಮನೂರು ಶಿವಶಂಕರಪ್ಪ ನಿಧನಕ್ಕೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸಂತಾಪ ವ್ಯಕ್ತಪಡಿಸಿದ್ದಾರೆ. ಪುತ್ರ ಎಸ್ ಎಸ್ ಮಲ್ಲಿಕಾರ್ಜುನ ಅವರಿಗೆ ಕಳಿಸಿದ ಶೋಕ ಸಂದೇಶದಲ್ಲಿ ಖರ್ಗೆ ಅವರು ಶಾಮನೂರು ಅವರೊಂದೊಗಿನ ತಮ್ಮ ಒಡನಾಟವನ್ನು ಮೆಲುಕು ಹಾಕಿದ್ದಾರೆ. ೧೯೭೨ ರಲ್ಲಿ ತಾವು ಮೊದಲ ಬಾರಿಗೆ ಶಾಸಕರಾಗಿ ಆಯ್ಕೆಯಾದಗಿನಿಂದ ಹಿಡಿದು ಇಲ್ಲಿಯವರೆಗೆ ಶಾಮನೂರು ಅವರೊಂದಿಗೆ ರಾಜಕೀಯ ಹೊರತಾಗಿ ವೈಯಕ್ತಿಕವಾಗಿ ಬಾಂಧವ್ಯ ಬೆಳೆದಿತ್ತು. ಶಾಮನೂರು ನಿಧನದಿಂದ ತಮಗೆ ವೈಯಕ್ತಿಕವಾಗಿ ಅಪಾರ ದುಃಖವಾಗಿದೆ ಎಂದು ಖರ್ಗೆ ಹೇಳಿದ್ದಾರೆ.

<><*<><>*><>

ನಿನ್ನೆ ನಿಧನರಾದ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ  ಕಾಂಗ್ರೆಸ್ ಹಿರಿಯ ಶಾಸಕ ಡಾ.ಶಾಮನೂರು ಶಿವಶಂಕರಪ್ಪ ಅವರ ಅಂತ್ಯಕ್ರಿಯೆ  ದಾವಣಗೆರೆಯಲ್ಲಿಂದು  ಸಂಜೆ  ಸಕಲ ಸರ್ಕಾರಿ ಗೌರವಗಳೊಂದಿಗೆ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಡಾ.ಜಿ.ಜಿ.ಎಂ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ. ಇಂದು ಮಧ್ಯಾಹ್ನದವರೆಗೂ ಸರ್ಕಾರಿ ಪ್ರೌಢಶಾಲಾ ಮೈದಾನದಲ್ಲಿ ಸಾರ್ವಜನಿಕರ ಅಂತಿಮ ದರ್ಶನಕ್ಕೆ ಇಡಲಾಗಿದೆ. ಸಂಜೆ ೪: ೩೦ ರ ಸುಮಾರಿಗೆ ಅಂತ್ಯಕ್ರಿಯೆ ನೆರವೇರಲಿದೆ ಎಂದು ಶಾಮನೂರು ಶಿವಶಂಕರಪ್ಪ ಅವರ ಪುತ್ರ, ತೋಟಗಾರಿಕಾ ಸಚಿವ ಎಸ್.ಎಸ್.ಮಲ್ಲಿಕಾರ್ಜುನ ತಿಳಿಸಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ಈಶ್ವರ ಬಿ.ಖಂಡ್ರೆ, ಎಂ.ಬಿ.ಪಾಟೀಲ್, ಮಾಜಿ ಮುಖ್ಯ ಮಂತ್ರಿ ಬಿ.ಎಸ್ .ಯಡಿಯೂರಪ್ಪ ಸೇರಿದಂತೆ ಅನೇಕ ಸಚಿವರು, ಶಾಸಕರು ಗಣ್ಯರು ಅಂತ್ಯಕ್ರಿಯೆಯಲ್ಲಿ ಭಾಗವಹಿಸಲಿದ್ದಾರೆ. ಗಣ್ಯರ ಆಗಮನದ ಹಿನ್ನೆಲೆಯಲ್ಲಿ ಮೆರವಣಿಗೆಯುದ್ದಕ್ಕೂ ಬಂದೋಬಸ್ತ್ ಗಾಗಿ ೧ ಸಾವಿರದ ೫೦೦ ಕ್ಕೂ ಅಧಿಕ ಪೊಲೀಸ್ ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ.

**<><*<><>*><>**

ಉತ್ತರ ಕರ್ನಾಟಕದ ಸಮಸ್ಯೆ, ಕಾನೂನು ಸುವ್ಯವಸ್ಥೆಯಲ್ಲಿ ಲೋಪ ಸೇರಿದಂತೆ ಹಲವಾರು ವಿಷಯಗಳ ಬಗ್ಗೆ ಇನ್ನೂ ಸುದೀರ್ಘ ಚರ್ಚೆಯ  ಅವಶ್ಯಕತೆ ಇರುವುದರಿಂದ ಅಧಿವೇಶನವನ್ನು ಇನ್ನೂ ಒಂದು ವಾರಗಳ ಕಾಲ ವಿಸ್ತರಿಸಬೇಕೆಂದು ಪ್ರತಿಪಕ್ಷ ನಾಯಕ ಆರ್.ಅಶೋಕ, ಸ್ಪೀಕರ್ ಯು.ಟಿ.ಖಾದರ್ ಅವರಿಗೆ ಪತ್ರ ಬರೆದಿದ್ದಾರೆ.  ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಶಾಸಕರು ಪ್ರಸ್ತಾಪ ಮಾಡಿರುವ ಹಲವು ಗಂಭೀರ ವಿಷಯಗಳಿಗೆ ಮುಖ್ಯಮಂತ್ರಿಗಳು ಮತ್ತು ಸಚಿವರು ಇನ್ನೂ ಉತ್ತರ ನೀಡಬೇಕಿದೆ. ಇದರ ಜೊತೆಗೆ ರಾಜ್ಯದಲ್ಲಿ ಕುಸಿದಿರುವ ಕಾನೂನು ಸುವ್ಯವಸ್ಥೆ, ಸರ್ಕಾರದ ವಿವಿಧ ಇಲಾಖೆಗಳಲ್ಲಿ ಅನುದಾನ ಬಳಕೆಯ ಕಳಪೆ ಸಾಧನೆ ಸೇರಿದಂತೆ ಅನೇಕ ವಿಚಾರಗಳ ಬಗ್ಗೆ ಚರ್ಚಿಸಲು ಶಾಸಕರಿಗೆ ಇನ್ನೂ ಸಾಕಷ್ಟು ಸಮಯಾವಕಾಶದ ಅಗತ್ಯವಿದೆ. ಪಡಿತರ ಚೀಟಿಯ ವಿಚಾರದಲ್ಲಿ ಸರ್ಕಾರ ನಿರ್ಲಕ್ಷ್ಯ ತೋರಿದೆ.  ಇಂತಹ ಗಂಭೀರ ಸಮಸ್ಯೆಗಳ ಬಗ್ಗೆ ಸದನದಲ್ಲಿ ಚರ್ಚೆಯಾಗಿ ಪರಿಹಾರ ಕಂಡುಕೊಳ್ಳಬೇಕಿದೆ. ಈ ಹಿನ್ನೆಲೆಯಲ್ಲಿ ಅಧಿವೇಶನವನ್ನು ಒಂದು ವಾರ ವಿಸ್ತರಿಸುವ ಬಗ್ಗೆ ಕೂಡಲೇ ತೀರ್ಮಾನ ಕೈಗೊಳ್ಳಬೇಕು ಎಂದು ಪತ್ರದಲ್ಲಿ ಮನವಿ ಮಾಡಿದ್ದಾರೆ.

**<><*<><>*><>**

"ನ್ಯಾಷನಲ್ ಹೆರಾಲ್ಡ್ ಪ್ರಕರಣಕ್ಕೆ ಸಂಬಂಧಿಸಿದಂತೆ ದೆಹಲಿ ಪೊಲೀಸರ ನೋಟೀಸ್ ಗೆ ಉತ್ತರ ನೀಡಲು ಕಾಲಾವಕಾಶ ಕೋರಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, “ಸೋಮವಾರ ದೆಹಲಿ ಪೊಲೀಸರಿಗೆ ಉತ್ತರ ನೀಡಲು ನಿರ್ಧರಿಸಲಾಗಿತ್ತು. ಆದರೆ ಶಾಮನೂರು ಶಿವಶಂಕರಪ್ಪ ಅವರ ನಿಧನದ ಹಿನ್ನೆಲೆಯಲ್ಲಿ ವಿಶೇಷ ವಿಮಾನದಲ್ಲಿ ದಾವಣಗೆರೆಗೆ ತೆರಳುತ್ತಿದ್ದು, ಅಧಿವೇಶನ ಮುಗಿದ ಬಳಿಕ ಉತ್ತರ ನೀಡಲು ಕಾಲಾವಕಾಶ ಕೇಳಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಕೆ.ಸಿ.ವೇಣುಗೋಪಾಲ್ ಹಾಗೂ ಸುರ್ಜೆವಾಲ ಅವರನ್ನು ಭೇಟಿಯಾಗಿರುವ ಬಗ್ಗೆ ಪ್ರತಿಕ್ರಿಯಿಸಿ, ದೆಹಲಿಗೆ ಬಂದಾಗ ಪಕ್ಷದ ಎಲ್ಲಾ ನಾಯಕರನ್ನು ಭೇಟಿಯಾಗುತ್ತೇನೆ. ನಿನ್ನೆ ಇಂದಿರಾ ಭವನದಲ್ಲಿ ನಡೆದ ಭೋಜನ ಕೂಟದಲ್ಲಿ ರಾಹುಲ್ ಗಾಂಧಿ, ಸೋನಿಯಾ ಗಾಂಧಿ ಅವರನ್ನೂ ಭೇಟಿ ಮಾಡಿರುವುದಾಗಿ ತಿಳಿಸಿದ್ದಾರೆ.

**<><*<><>*><>**

ಶುದ್ಧ ಗಾಳಿ ಮತ್ತು ಪರಿಸರ ಹೊಂದಿದ ನಗರಗಳಲ್ಲಿ ಕೊಪ್ಪಳಕ್ಕೆ ರಾಜ್ಯದಲ್ಲಿ ಪ್ರಥಮ ಸ್ಥಾನ ದೊರೆತಿದೆ. ನವೆಂಬರ್‌ನಲ್ಲಿ ಸ್ವಚ್ಛ ಪರಿಸರ ಮತ್ತು ಕಲುಷಿತ ಪರಿಸರ ಹೊಂದಿದ್ದ ದೇಶದ ಅಗ್ರ ೧೦ ನಗರಗಳ ಪಟ್ಟಿ ಬಿಡುಗಡೆ ಆಗಿದೆ. ಇದರಲ್ಲಿ ಕರ್ನಾಟಕದ ೬ ನಗರ, ಸ್ವಚ್ಛ ನಗರಗಳ ಸ್ಥಾನ ಪಡೆದಿವೆ. ಸೆಂಟರ್ ಫಾರ್ ಕ್ಲೀನ್ ಏರ್ ಸಂಸ್ಥೆ ಈ ವರದಿಯನ್ನು ಸಿದ್ಧಪಡಿಸಿದೆ. ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರ ಮತ್ತು ಅರಣ್ಯ ಇಲಾಖೆಯ ನಗರ ಸಭೆಯ ಅಧಿಕಾರಿಗಳು ಪರಿಸರದಲ್ಲಿ ಮಾಲಿನ್ಯತೆ ತಡೆಯುವಲ್ಲಿ ಉತ್ತಮವಾಗಿ ಕಾರ್ಯ ನಿರ್ವಹಿಸಿದ್ದಾರೆ. ಹೊಸ ಲೇಔಟ್‌ಗಳಿಗೆ ಪರವಾನಿಗೆ ನೀಡುವಾಗ ಅರಣ್ಯೀಕರಣ ಉದ್ಯಾನವನ ನಿರ್ಮಾಣ ಮತ್ತು ಚರಂಡಿ ವ್ಯವಸ್ಥೆ ನಿರ್ಮಾಣದ ಪ್ರಮಾಣ ಪತ್ರ ಪಡೆದ ನಂತರವೇ ಪರವಾನಿಗೆ ನೀಡಲಾಗುತ್ತದೆ ಎಂದು ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶ್ರೀನಿವಾಸ ಗುಪ್ತ ತಿಳಿಸಿದ್ದಾರೆ.

**<><*<><>*><>**

ರಾಜ್ಯದ ಹಲವು ಜಿಲ್ಲೆಗಳಲ್ಲಿ ತಾಪಮಾನ ಕುಸಿತಿದ್ದು, ಬೆಂಗಳೂರು ಸೇರಿದಂತೆ ರಾಜ್ಯದ್ಯಂತ ಚಳಿ ಹೆಚ್ಚಳವಾಗಿದೆ. ಮೈನಡುಗುವ ಚಳಿಗೆ ಜನರು ತತ್ತರಿಸಿದ್ದಾರೆ. ಬೆಂಗಳೂರು, ಬೆಂಗಳೂರು ಗ್ರಾಮಾಂತರ, ಬೀದರ್, ವಿಜಯಪುರ, ಬಾಗಲಕೋಟೆ, ಬೆಳಗಾವಿ, ಧಾರವಾಡ, ರಾಯಚೂರು ಜಿಲ್ಲೆಗಳಲ್ಲಿ ಮುಂದಿನ ದಿನಗಳಲ್ಲಿ ಉಷ್ಣಾಂಶ ಕುಸಿತವಾಗಲಿದೆ. ಡಿಸೆಂಬರ್ ೮ ರಿಂದ ೧೪ರವರೆಗಿನ ಶೀತ ಗಾಳಿ ದಶಕದ ಹವಾಮಾನ, ಇತಿಹಾಸವನ್ನೇ ಬದಲಿಸಿದ ಶೀತ ಗಾಳಿಯಾಗಿತ್ತು. ಇದು ತಾಪಮಾನದ ಕುಸಿತವಾಗಿರಲಿಲ್ಲ. ಜಾಗತಿಕ ಹವಾಮಾನ ವೈಪರಿತ್ಯಗಳು, ಸ್ಥಳೀಯ ವಾಯುಮಂಡಲದ ವಿದ್ಯಮಾನವಾಗಿದ್ದು, ದಖನ್ ಪ್ರಸ್ತಭೂಮಿಯನ್ನು ಶೀತದ ಜಲಾಶಯವನ್ನಾಗಿ ಪರಿವರ್ತಿಸಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಭೂಮಿ ತಣ್ಣಗಾಗುತ್ತಿದ್ದಂತಯೇ ತೇವಾಂಶವು ದಟ್ಟವಾದ ಮಂಜಾಗಿ ಘನಿಭವಿಸಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**